# ಕರ್ನಾಟಕ ಸರ್ಕಾರದ ನಡಾವಳಿಗಳು

ವಿಷಯ : M/s Hero Rooftop Energy Private Limited ಕಂಪನಿಗೆ ಗದಗ ಜಿಲ್ಲೆಯ ಮುಂಡರಗಿ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 175 ಮೆ.ವ್ಯಾ. (75.6 ಮೆ.ವ್ಯಾ. ಪವನ + 99.4 ಮೆ.ವ್ಯಾ. ಸೌರ) ಸಾಮರ್ಥ್ಯದ ಪವನ ಮತ್ತು ಸೌರ ಮಿಶ್ರಿತ ಹೈಬ್ರಿಡ್ ಯೋಜನೆಯನ್ನು ಹಂಚಿಕೆ ಮಾಡುವ ಕುರಿತು.

**ಓದಲಾಗಿದೆ :**
1) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರ ಪತ್ರ ಸಂಖ್ಯೆ:KREDL/ HREPL - 175 MW (75.6 W + 99.4 S)/Gadag/ F-18/2023 0392, ದಿನಾಂಕ:14.02.2023.
2) ದಿನಾಂಕ:04.03.2023 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡಾವಳಿ.
3) ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:15113/2022 (GM-RES)

**ಪ್ರಸ್ತಾವನೆ :-**

ಮೇಲೆ ಓದಲಾದ ಕ್ರ.ಸಂ. (1)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ಇವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ M/s Hero Rooftop Energy Private Limited ಕಂಪನಿಗೆ ಗದಗ ಜಿಲ್ಲೆಯ, ಮುಂಡರಗಿ ತಾಲ್ಲೂಕಿನ ದ.ಸ.ರಾಮೇನಹಳ್ಳಿ, ಚುರ್ಚಿಹಾಳ್, ಆಲ್ಲೂರು, ದಂಬಾಲು, ಮೇಹುಂಡಿ, ಶಿರೂರ್, ಐತಾಪುರ ಮತ್ತು ವೆಂಕಟಾಪುರ ಗ್ರಾಮಗಳಲ್ಲಿ 175 ಮೆ.ವ್ಯಾ. (75.6 ಮೆ.ವ್ಯಾ. ಪವನ + 99.4 ಮೆ.ವ್ಯಾ. ಸೌರ) ಸಾಮರ್ಥ್ಯದ ಪವನ ಮತ್ತು ಸೌರ ಮಿಶ್ರಿತ ಹೈಬ್ರಿಡ್ ಯೋಜನೆಯ ಕುರಿತು ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ, ಕೆ.ಆರ್.ಇ.ಡಿ.ಎಲ್.ಗೆ ಸಲ್ಲಿಸಿರುವುದಾಗಿ ಹಾಗೂ ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮುಖಾಂತರ ಸ್ವಂತ ಬಳಕೆಗೆ/ಸಮೂಹ ಸ್ವಂತ ಬಳಕೆ/ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ವರ್ಗದಡಿ ಪ್ರತಿ ವಿಂಡ್ ಟರ್ಬೈನ್ ಗೆ 04 ಎಕರೆಯಂತೆ Footprint basis ಲೆಕ್ಕೀಕರಿಸಿ, ಜಮೀನುಗಳನ್ನು ಉಪಯೋಗಿಸುವುದು ಮತ್ತು ಪವನ ವಿದ್ಯುತ್ ಘಟಕಗಳ ಅಂತರವನ್ನು MNRE ಸುತ್ತೋಲೆ/ಮಾರ್ಗಸೂಚಿಯಂತೆ ಅಳವಡಿಸುವಂತೆ ಷರತ್ತುಗಳನ್ನು ವಿಧಿಸಿ, ಹಂಚಿಕೆ ನೀಡುವಂತೆ ಕೋರಿರುವುದಾಗಿ ತಿಳಿಸಿರುತ್ತಾರೆ.

ಮುಂದುವರೆದು, M/s Hero Rooftop Energy Private Limited ಇವರು 75.6 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ 2.7 ಮೆ.ವ್ಯಾ. ಸಾಮರ್ಥ್ಯದ 28 ವಿಂಡ್ ಟರ್ಬೈನ್‌ಗಳನ್ನು ಅಳವಡಿಸುತ್ತಿದ್ದು, ಪ್ರತಿ ವಿಂಡ್ ಟರ್ಬೈನ್‌ಗೆ 04 ಎಕರೆಯಂತೆ ಲೆಕ್ಕೀಕರಿಸಿ, ಒಟ್ಟು 112 ಎಕರೆ (28 Nos WTG X 04 Acres = 112 Acres) ಜಮೀನನ್ನು ಟೋಪೋಶೀಟ್ ಸಂಖ್ಯೆ:48 M/11 ಮತ್ತು 48 M/15 ರಲ್ಲಿ ಹಾಗೂ 99.4 ಮೆ.ವ್ಯಾ. ಸಾಮರ್ಥ್ಯದ ಸೌರ ಘಟಕಗಳನ್ನು ಅಳವಡಿಸಲು ಪ್ರತಿ ಮೆ.ವ್ಯಾ. ಸಾಮರ್ಥ್ಯಕ್ಕೆ 3.5 ಎಕರೆಯಂತೆ (99.4 MW X 3.5 Acres = 348 Acres) ಜಮೀನು ಒಟ್ಟು 460 ಎಕರೆ (112 Acres + 348 Acres=460 Acres) ಜಮೀನನ್ನು ಉಪಯೋಗಿಸಿಕೊಳ್ಳಬಹುದಾಗಿದೆ.

M/s Hero Rooftop Energy Private Limited ದಿನಾಂಕ:22.08.2017ರಂದು ನೋಂದಾವಣೆಗೊಂಡಿದ್ದು, ಇದರ ನೋಂದಾಯಿತ ಕಚೇರಿಯು ನವದೆಹಲಿಯಲ್ಲಿ ಸ್ಥಾಪಿತಗೊಂಡಿರುತ್ತದೆ. ಸದರಿ ಕಂಪನಿಯು M/s Hero Futures Energy Private Limited ಇವರಿಂದ ಸ್ಥಾಪಿತವಾದ SPV ಸಂಸ್ಥೆ ಆಗಿರುತ್ತದೆ. ಸದರಿ ಕಂಪನಿಯ ನೆಟ್‌ವರ್ತ್ ದಿನಾಂಕ:31.03.2022ರ ಅಂತ್ಯಕ್ಕೆ ರೂ.410.55 ಕೋಟಿಗಳಾಗಿರುತ್ತದೆ ಎಂದು ಚಾರ್ಟೆಡ್ ಅಕೌಂಟೆಂಟ್ ದೃಢೀಕರಣ ಪತ್ರವನ್ನು ನೀಡಿರುತ್ತಾರೆ.

M/s Hero Rooftop Energy Private Limited ಕಂಪನಿಯು ನವೀಕರಿಸಬಹುದಾದ ಇಂಧನ ನೀತಿ 2022-27ರಂತೆ 175 ಮೆ.ವ್ಯಾ. (75.6 ಮೆ.ವ್ಯಾ. ಪವನ + 99.4 ಮೆ.ವ್ಯಾ. ಸೌರ) ಸಾಮರ್ಥ್ಯದ ಪವನ ಮತ್ತು ಸೌರ ಮಿಶ್ರಿತ ಹೈಬ್ರಿಡ್ ಪಾರ್ಕ್ ಯೋಜನೆಗೆ ಅರ್ಜಿ ಶುಲ್ಕ ಹಾಗೂ 30% ಸಂಸ್ಕರಣಾ ಶುಲ್ಕವನ್ನು ಪಾವತಿಸಿರುತ್ತಾರೆ. ಬಾಕಿ ಉಳಿದ 70% ಸಂಸ್ಕರಣಾ ಶುಲ್ಕವನ್ನು ಹಂಚಿಕೆ ಆದೇಶ ಹೊರಡಿಸಿದ ನಂತರ ಕೆ.ಆರ್.ಇ.ಡಿ.ಎಲ್. ನಿಯಮಿತದೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಪೂರ್ವದಲ್ಲಿ ಸಂದಾಯ ಮಾಡಬೇಕಾಗಿರುತ್ತದೆ.

ಮೇಲೆ ಓದಲಾದ ಕ್ರ.ಸಂ. (2)ರ ಹಂಚಿಕೆ ಸಮಿತಿ ಸಭೆಯಲ್ಲಿ M/s Hero Rooftop Energy Private Limited ಇವರು ಗದಗ ಜಿಲ್ಲೆಯ, ಮುಂಡರಗಿ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ State Grid ವರ್ಗದಡಿಯಲ್ಲಿ ಹಂಚಿಕೆ ನೀಡುವಂತೆ ಕೋರಿರುವ 175 ಮೆ. ವ್ಯಾ (75.6 ಮೆ. ವ್ಯಾ ಪವನ + 99.4 ಮೆ. ವ್ಯಾ ಸೌರ) ಹೈಬ್ರಿಡ್ (ಪವನ ಮತ್ತು ಸೌರ ಮಿಶ್ರಿತ) ಯೋಜನೆಯ ಸ್ಥಳವು ಖಾಸಗಿ ಜಮೀನಾಗಿದ್ದು ಹಂಚಿಕೆಗೆ ಲಭ್ಯವಿದೆ. ಸದರಿಯವರು ಅಳವಡಿಸುವ ವಿಂಡ್ ಟರ್ಬೈನ್ ಗಳಿಗೆ ಅಕ್ಷಾಂಶ ಮತ್ತು ರೇಖಾಂಶಗಳನ್ನು ನೀಡಿರುತ್ತಾರೆ. ಸದರಿಯವರು 28 ಸಂಖ್ಯೆಯ ವಿಂಡ್ ಟರ್ಬೈನ್‌ಗಳನ್ನು (2700 ಕಿ.ವ್ಯಾ ಸಾಮರ್ಥ್ಯದ ಟರ್ಬೈನ್‌ಗಳು) ಅಳವಡಿಸಲು ಪ್ರತಿ ಟರ್ಬೈನ್‌ಗೆ 10 ಎಕರೆಯಂತೆ ಒಟ್ಟು 280 ಎಕರೆ (28 Nos of WTG x 10 Acres = 280 Acres) ಜಮೀನನ್ನು ಹಾಗೂ 99.4 ಮೆ.ವ್ಯಾ ಸಾಮರ್ಥ್ಯದ ಸೌರ ಘಟಕಗಳನ್ನು ಅಳವಡಿಸಲು ಪ್ರತಿ ಮೆ.ವ್ಯಾ ಸಾಮರ್ಥ್ಯಕ್ಕೆ 4 ಎಕರೆಯಂತೆ ಒಟ್ಟು 397.6 ಎಕರೆ (99.4 MW x 4 Acre = 397.6 Acres) ಜಮೀನು ಸೇರಿ ಒಟ್ಟು 677.6 ಎಕರೆ (280 Acre + 397.6 Acre =677.6 Acres) ಜಮೀನನ್ನು ಟೋಪೋಶೀಟ್ ಸಂಖ್ಯೆ:48 M/11 ಮತ್ತು 48 M/15 ರಲ್ಲಿ ಉಪಯೋಗಿಸಕೊಳ್ಳಬಹುದಾಗಿದೆ ಹಾಗೂ ರಸ್ತೆ ಮತ್ತು Pooling Substation ನಿರ್ಮಾಣಕ್ಕಾಗಿ ಬೇಕಾಗುವ ಹೆಚ್ಚುವರಿ ಜಮೀನನ್ನು ಅಗತ್ಯಕ್ಕೆ ತಕ್ಕಂತೆ ಉಪಯೋಗಿಸಬಹುದಾಗಿದೆ.

ಸದರಿಯವರು 175 ಮೆ.ವ್ಯಾ (75.6 ಮೆ.ವ್ಯಾ ಪವನ + 99.4 ಮೆ.ವ್ಯಾ ಸೌರ) ಸಾಮರ್ಥ್ಯದಿಂದ ಉತ್ಪಾದಿಸುವ ವಿದ್ಯುತ್ ನ್ನು State Grid ವರ್ಗದಡಿಯಲ್ಲಿ 400/220 kV Doni KPTCL substation ಇಂದ evacuate ಮಾಡುವುದಾಗಿ ತಿಳಿಸಿರುತ್ತಾರೆ.

ಮುಖ್ಯ ಇಂಜಿನಿಯರ್ (ಯೋಜನೆ ಮತ್ತು ಸಮನ್ವಯ), ಕೆಪಿಟಿಸಿಎಲ್ ಇವರು ಸದರಿ ಯೋಜನೆಗೆ 400/220kV KPTCL substation at Doni, Mundragi taluk, Gadag district ಇಲ್ಲಿ evacuation ಲಭ್ಯತೆ ಇರುವುದಾಗಿ ತಿಳಿಸಿದರು. ಈ ಕೆಳಕಂಡ ಷರತ್ತುಗಳಿಗೊಳಪಟ್ಟು M/s Hero Rooftop Energy Private Limited ಕಂಪನಿಗೆ 175 ಮೆ.ವ್ಯಾ. (75.6 ಮೆ.ವ್ಯಾ. ಪವನ + 99.4 ಮೆ.ವ್ಯಾ. ಸೌರ) ಸಾಮರ್ಥ್ಯದ ಪವನ ಮತ್ತು ಸೌರ ಮಿಶ್ರಿತ ಹೈಬ್ರಿಡ್ ಯೋಜನೆಯನ್ನು ಹಂಚಿಕೆ ನೀಡಲು ಸಮಿತಿಯು ಸರ್ವಾನುಮತಿಯಿಂದ ಶಿಫಾರಸ್ಸು ಮಾಡಿರುತ್ತದೆ.

i. ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮುಖಾಂತರ ಸ್ವಂತ ಬಳಕೆ/ಮೂರನೇ ವ್ಯಕ್ತಿಗೆ ಮಾರಾಟ ಮಾಡಲು.
ii. ಸದರಿ ಯೋಜನೆಗೆ KPTCL ಇಂದ evacuation ಅನುಮತಿ ಪಡೆದು ಅನುಷ್ಠಾನಗೊಳಿಸುವುದು ಅಭಿವೃದ್ಧಿದಾರರ ಜವಾಬ್ದಾರಿ ಯಾಗಿರುತ್ತದೆ.
iii. ಈಗಾಗಲೇ ಇತರೆ ಅಭಿವೃಧ್ಧಿದಾರರುಗಳು ಹಂಚಿಕೆ/ತಾತ್ವಿಕ ಅನುಮೋದನೆಯನ್ನು ಪಡೆದಿರುವ ಪ್ರದೇಶದಲ್ಲಿ ಪ್ರಸ್ತಾಪಿತ ಯೋಜನೆಯ WTG Co-ordinates Overlap ಆಗಿದ್ದಲ್ಲಿ, ಅಂತಹ WTGs ಸಾಮರ್ಥ್ಯವು ರದ್ದುಗೊಳ್ಳುತ್ತದೆ.
iv. ಅಭಿವೃದ್ಧಿದಾರರು ಸದರಿ ಹೈಬ್ರಿಡ್ (ಪವನ ಮತ್ತು ಸೌರ ಮಿಶ್ರಿತ) ವಿದ್ಯುತ್ ಯೋಜನೆಯನ್ನು MNRE ರವರ ಸುತ್ತೋಲೆ/ ಮಾರ್ಗಸೂಚಿಗಳು ಹಾಗೂ ರಾಜ್ಯ ಸರ್ಕಾರದ ಹೊಸ RE Policy 2022-27 ಮತ್ತು Amendment-I Dated:27-02-2023 ರ ಪ್ರಕಾರ ಅನುಷ್ಠಾನಗೊಳಿಸುವುದು.

....3